ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1129
ಮಾನ್ಯ ಸದಸ್ಯರ ಹೆಸರು	:	ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)
ವಿಷಯ	:	ಪ್ರವಾಸೋದ್ಯಮ ಅಭಿವೃದ್ಧಿ ಕುರಿತು
ಉತ್ತರಿಸುವ ದಿನಾಂಕ	:	13.03.2020
ಉತ್ತರಿಸುವ ಸಚಿವರು	:	ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಪ್ರವಾಸೋದ್ಯಮ ಇಲಾಖೆಯಿಂದ ರೂಪಿಸಲಾಗಿರುವ ಹೊಸ ಯೋಜನೆಗಳು ಯಾವುವು;	ಪ್ರವಾಸೋದ್ಯಮ ಇಲಾಖೆಯಿಂದ ರೂಪಿಸಿರುವ ಹೊಸ ಯೋಜನೆಗಳು ಈ ಕೆಳಕಂಡಂತಿವೆ: 1. ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ರಕ್ಷಣೆಗಾಗಿ ಪ್ರವಾಸಿ ಮಿತ್ರರನ್ನು ನಿಯೋಜಿಸಲಾಗಿರುತ್ತದೆ. 2. ಪ್ರವಾಸಿಗರಿಗೆ ಪ್ರವಾಸಿ ತಾಣದಲ್ಲಿ ಮನೆಯ ವಾತಾವರಣವನ್ನು ಒದಗಿಸುವ ಉದ್ದೇಶದಿಂದ ಹೋಮ್ ಸ್ಟೇ ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ. 3. ರಾಜ್ಯದ ಐತಿಹಾಸಿಕ ಪ್ರವಾಸಿ ತಾಣಗಳಾದ ಹಂಪಿ, ಶ್ರೀರಂಗಪಟ್ಟಣ ಕೋಟೆ, ಮೈಸೂರು ಅರಮನೆ ಮುಂತಾದ ತಾಣಗಳಲ್ಲಿ ಧ್ವನಿ-ಬೆಳಕು ಕಾರ್ಯಕ್ರಮವನ್ನು ಆಯೋಜಿಸಲಾಗಿದೆ 4. ರಾಜ್ಯದ ಪ್ರಮುಖ ಕೋಟೆಗಳ ಸಂರಕ್ಷಣೆ ಕಾಮಗಾರಿಗಳು. 5. ರಾಜ್ಯದ ಪ್ರಮುಖ ಕಡಲ ತೀರಗಳಲ್ಲಿ ಪ್ರವಾಸಿ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲಾಗಿದೆ. 6. ರಾಜ್ಯದ ಐತಿಹಾಸಿಕ ಹಾಗೂ ಪಾರಂಪರಿಕ ಸಂಸ್ಕೃತಿಯನ್ನು ಬಿಂಬಿಸುವ ಸಲುವಾಗಿ ಆಚರಿಸಲಾಗುವ ಪ್ರಮುಖ ಉತ್ಸವಗಳಿಗೆ ಇಲಾಖೆಯಿಂದ ಅನುದಾನ ನೀಡಲಾಗುತ್ತಿದೆ. ಇವುಗಳಲ್ಲದೇ, ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರಿಗೆ ಅಗತ್ಯವಾಗಿರುವ ಮೂಲಭೂತ ಸೌಕರ್ಯಗಳಾದ, ಯಾತ್ರಿ ನಿವಾಸ, ಡಾರ್ಮಿಟರಿ, ರಸ್ತೆ ಅಭಿವೃದ್ಧಿ, ಕುಡಿಯುವ ನೀರು, ಶೌಚಾಲಯ, ಪರಿಸರ ಪ್ರವಾಸಿ ಸೌಲಭ್ಯಗಳು, ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಪ್ರವಾಸಿ ಮೇಳಗಳಲ್ಲಿ ರಾಜ್ಯದ ಪ್ರವಾಸಿ ತಾಣಗಳ ಪ್ರಚಾರ, ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವ ಸಂಬಂಧ ಸಲಹೆ-ಸೂಚನೆಗಳನ್ನು ನೀಡಲು ಟೂರಿಸಂ ಟಾಸ್ಕ್ ಫೋರ್ಸ್ ರಚನೆ, ರಾಜ್ಯದ ಪ್ರವಾಸಿ ತಾಣಗಳನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ಕರ್ನಾಟಕ ಟೂರಿಸಂ ವಿಷನ್ ಗ್ರೂಪ್ ಶಿಫಾರಸ್ಸುಗಳ ಅನುಷ್ಠಾನ, ರಾಜ್ಯದ ಪ್ರಮುಖ 41 ಕೇಂದ್ರಿಕೃತ ಪ್ರವಾಸಿ ತಾಣಗಳ ಸಮಗ್ರ ಅಭಿವೃದ್ಧಿ ಮುಂತಾದ ಯೋಜನೆಗಳನ್ನು ಹಂತ ಹಂತವಾಗಿ ಕೈಗೊಳ್ಳಲಾಗುತ್ತಿದೆ.
ಆ)	ಈ ಯೋಜನೆಗಳಿಂದ ಪ್ರವಾಸೋದ್ಯಮ ಅಭಿವೃದ್ಧಿಗೆ ಅನುಕೂಲವಾಗಿದೆಯೇ;	ಹೌದು.
ಇ)	ಪ್ರವಾಸೋದ್ಯಮದಿಂದ ಸರ್ಕಾರಕ್ಕೆ ವಾರ್ಷಿಕವಾಗಿ ಎಷ್ಟು ಆದಾಯ ಬರುತ್ತಿದೆ; ಕಳೆದ 3 ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು?	ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ (ಕೆ.ಎಸ್.ಟಿ.ಡಿ.ಸಿ), ಅರಣ್ಯ ವಸತಿ ಹಾಗೂ ವಿಹಾರಧಾಮಗಳ ಸಂಸ್ಥೆ (ಜೆ.ಎಲ್.ಆರ್) ಮತ್ತು ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ (ಕೆ.ಇ.ಎ) ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಕಳೆದ 03 ವರ್ಷಗಳಲ್ಲಿ ಈ ಸಂಸ್ಥೆಗಳು ತೆರಿಗೆ ನಂತರದ ಲಾಭ ಈ ಕೆಳಗಿನಂತಿದೆ: **(ರೂ.ಲಕ್ಷಗಳಲ್ಲಿ)** **ಸಂಸ್ಥೆ** / **2016-17** / **2017-18** / **2018-19** ಕೆ.ಎಸ್.ಟಿ.ಡಿ.ಸಿ / 239.92 / 133.07 / 147.44 ಜೆ.ಎಲ್.ಆರ್ / 641.00 / 662.00 / 574.00 ಕೆ.ಇ.ಎ. / (-)31.08 / 11.64 / 191.53* ***ಲೆಕ್ಕಪರಿಶೋಧನಾ ಪೂರ್ವ ಅಂದಾಜು** ಮುಂದುವರೆದು, ಪ್ರವಾಸೋದ್ಯಮದಿಂದ ಸಾರಿಗೆ, ಹೋಟೆಲ್ ಉದ್ಯಮ, ಹೋಮ್ ಸ್ಟೇ ಮುಂತಾದವುಗಳಿಂದ ಪರೋಕ್ಷವಾಗಿ ಸರ್ಕಾರಕ್ಕೆ ಆದಾಯ ಜಮೆಯಾಗುತ್ತದೆ. ಆದ್ದರಿಂದ, ಪ್ರವಾಸೋದ್ಯಮದಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯದ ಬಗ್ಗೆ ನಿಖರವಾಗಿ ಗುರುತಿಸುವುದು ಕಷ್ಟಸಾಧ್ಯವಾಗಿರುತ್ತದೆ.

ಕಡತ ಸಂಖ್ಯೆ: ಟಿಒಆರ್ 50 ಟಿಡಿವಿ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.